**2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26**

# ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012

**ಪ್ರಕರಣಗಳ ಪಟ್ಟಿ**


ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು
3. ವೈದ್ಯಕೀಯ ಕೋರ್ಸನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆ

3ಎ. ಆದ್ಯತೆ ಮತ್ತು ವಿನಾಯಿತಿ

4. ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ
5. ಸೂಪರ್‌ಸ್ಪೆಷಾಲಿಟಿ ಪದವಿ ಕೋರ್ಸು ಪೂರ್ಣಗೊಳಿಸಿದ ಅಭ್ಯರ್ಥಿಯ ಕಡ್ಡಾಯ ಸೇವಾ

5ಎ. ಅಪೀಲು

6. ದಂಡ
7. ಇತರ ಕಾನೂನುಗಳನ್ನು ಅಧಿಕ್ರಮಿಸುವ ಅಧಿನಿಯಮ
8. ತೊಂದರೆಗಳ ನಿವಾರಣೆಗೆ ಅಧಿಕಾರ
9. ನಿಯಮಗಳ ರಚನಾಧಿಕಾರ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2015ರ ಅಧಿನಿಯಮ ಸಂಖ್ಯೆ 26.–** ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಕಿರಿಯ ನಿವಾಸಿ ತರಬೇತಿ ಪಡೆಯುವವರ ಮತ್ತು ಹಿರಿಯ ನಿವಾಸಿ ತರಬೇತಿ ಪಡೆಯುವವರ ಸೇವೆಯ ಲಭ್ಯತೆಯನ್ನು ಸುನಿಶ್ಚಿಗೊಳಿಸುವುದಕ್ಕೆ ಪದವಿಗಳು ಅಥವಾ ಸ್ನಾತಕೋತ್ತರ ಪದವಿಗಳು ಅಥವಾ ಡಿಪ್ಲೋಮಾಗಳನ್ನು ಪ್ರದಾನ ಮಾಡುವುದಕ್ಕೆ ಮೊದಲು ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಕಡ್ಡಾಯ ಸೇವಾ ತರಬೇತಿ ಉಪಬಂಧ ಕಲ್ಪಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2012ರ ವಿಧಾನಸಭೆಯ ವಿಧೇಯಕ ಸಂಖ್ಯೆ 31:, ಕಡತ ಸಂಖ್ಯೆ:ಸಂವ್ಯಶಾಇ 57 ಶಾಸನ 2012)
(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25 ಮತ್ತು 26ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**II**

**2017ರ ಅಧಿನಿಯಮ ಸಂಖ್ಯೆ 35.–** ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012ಕ್ಕೆ (2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26)**,–**

(1) ಖಾಯಂ ನೋಂದಣಿಯನ್ನು ನೀಡುವ ಮೊದಲು ವೈದ್ಯಕೀಯ ಪದವಿ ಅಥವಾ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಿದ ತರುವಾಯ, ತರಬೇತಿಯ ಪರಿಕಲ್ಪನೆಯನ್ನು ಬಿಟ್ಟು, ಕಡ್ಡಾಯ ಗ್ರಾಮೀಣ ಸೇವೆಯನ್ನು ಮಾತ್ರ ಉಳಿಸಿಕೊಳ್ಳಲು;

(2) ಗ್ರಾಮೀಣ ಸೇವೆಗೆ ಒಳಗಾಗದಿರುವ ಅಂಥ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳು ಪದವಿ ಪ್ರದಾನ ಮಾಡುವುದರ ಮೇಲಿನ ನಿರ್ಬಂಧಕಾಜ್ಞೆಯನ್ನು ಹಿಂತೆಗೆದುಕೊಳ್ಳಲು,

**–** ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ, ಈ ವಿಧೇಯಕ.

[2017ರ ವಿಧಾನಸಭೆಯ ವಿಧೇಯಕ ಸಂಖ್ಯೆ:25 ಕಡತ ಸಂಖ್ಯೆ:ಸಂವ್ಯಶಾಇ 10 ಶಾಸನ 2017]
[ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25 ಹಾಗೂ 26ನೆಯ ನಮೂದನೆಯಡಿಯಲ್ಲಿ ಬರುತ್ತದೆ]

**III**

**2024ರ ತಿದ್ದುಪಡಿ ಅಧಿನಿಯಮ ಸಂಖ್ಯೆ:03**, ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26) ರ ಪ್ರಕರಣ 3, 4 ಮತ್ತು 5 ಅನ್ನು,-

(1) ಇಲಾಖೆಯಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ ಅಸ್ತಿತ್ವದಲ್ಲಿರುವ ಖಾಲಿ ಹುದ್ದೆಗಳಿಗೆ ವೈದ್ಯರನ್ನು ಕೌನ್ಸಿಲಿಂಗ್ ಮೂಲಕ ಕಡ್ಡಾಯವಾಗಿ ಸ್ಥಳ ನಿಯುಕ್ತಿಗೊಳಿಸುವುದನ್ನು ನಿರ್ಬಂಧಿಸಲು ಮತ್ತು ಸ್ಟೈಪಂಡನ್ನು ಸರ್ಕಾರವು ನಿರ್ಧರಿಸಲು; ಮತ್ತು

(2) ಕೇಂದ್ರ ಅಥವಾ ರಾಜ್ಯ ಸರ್ಕಾರಿ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಕಡ್ಡಾಯ ಗ್ರಾಮೀಣ ಸೇವೆಯಿಂದ ವಿನಾಯಿತಿಸಲು,

- ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಅಭ್ಯರ್ಥಿಗಳು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ 05) ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.

[2023ರ ವಿಧಾನ ಸಭೆಯ ವಿಧೇಯಕ ಸಂಖ್ಯೆ:18, ಕಡತ ಸಂಖ್ಯೆ: ಸಂವ್ಯಶಾಇ 28 ಶಾಸನ 2023]

[ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25 ಮತ್ತು 26ನೇ ನಮೂದನೆಯಡಿ ಬರುತ್ತದೆ.]

[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:45, ದಿನಾಂಕ:30.01.2024 ರಲ್ಲಿ ಪ್ರಕಟಗೊಂಡಿದೆ]

**IV**

**2025ರ ಅಧಿನಿಯಮ ಸಂಖ್ಯೆ: 71** ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ,-

(1) ಗ್ರಾಮೀಣ ಪ್ರದೇಶಗಳಿಗೆ ಸ್ಥಳನಿಯುಕ್ತಿ ಮಾಡಿದ ನಂತರವೂ ಹೆಚ್ಚುವರಿ ಉಳಿಯುವ ಎಂಬಿಬಿಎಸ್ ಪದವೀಧರರನ್ನು ನಗರ ಪ್ರದೇಶಗಳಲ್ಲಿಯೂ ಸ್ಥಳನಿಯುಕ್ತಿಗೊಳಿಸುವುದು;

(2) ಗ್ರಾಮೀಣ ಪ್ರದೇಶಗಳಲ್ಲಿನ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಇತರ ಆಸ್ಪತ್ರೆಗಳಿಗೆ ಸ್ನಾತಕೋತ್ತರ ಪದವೀಧರರನ್ನು ಸ್ಥಳನಿಯುಕ್ತಿಗೊಳಿಸುವುದು;

(3) ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡಕ್ಕೆ ಮತ್ತು ಒಪ್ಪಿಕೊಂಡಂಥ ಇತರ ತತ್ಪರಿಣಾಮಗಳಿಗೆ ಒಳಪಡುವ ಮುಚ್ಚಳಿಕೆಯನ್ನು ಸಲ್ಲಿಸಿದ ಮೇಲೆ ಉನ್ನತ ವ್ಯಾಸಂಗಗಳಾದ ಸ್ನಾತಕೋತ್ತರ ಮತ್ತು ಸೂಪರ್ ಸ್ಪೆಷಾಲಿಟಿ ಕೋರ್ಸ್‌ಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡುವುದು; ಮತ್ತು

(4) ಕೆಲವು ಇತರ ಆನುಷಂಗಿಕ ತಿದ್ದುಪಡಿಗಳನ್ನು ಸಹ ಮಾಡುವುದು.

(5) ವಿಷಯವು ತುರ್ತು ಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧ್ಯಾದೇಶ, 2025ನ್ನು (2025ರ ಕರ್ನಾಟಕ ಅಧ್ಯಾದೇಶ 06) ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 29, ಕಡತ ಸಂಖ್ಯೆ:ಸಂವ್ಯಶಾಇ 35 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25 ಮತ್ತು 26ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:583, ದಿನಾಂಕ:12.09.2025ರಲ್ಲಿ ಪ್ರಕಟಗೊಂಡಿದೆ]

**2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26**

(2015ರ ಜೂನ್ ತಿಂಗಳ ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ [1][XXX][1] ಅಧಿನಿಯಮ, 2012**

(2015ರ ಮೇ ತಿಂಗಳ ಇಪ್ಪತ್ತೊಂಬತ್ತನೇ ದಿನಾಂಕದಂದು ರಾಷ್ಟ್ರಪತಿಯವರಿಂದ ಅನುಮತಿಯನ್ನು ಪಡೆಯಲಾಗಿದೆ)

(2017 ಅಧಿನಿಯಮ ಸಂಖ್ಯೆ 35, 2024ರ 03 ಮತ್ತು 2025ರ 71 ರಲ್ಲಿ ತಿದ್ದುಪಡಿಯಾದಂತೆ)

ಪದವಿಗಳು ಅಥವಾ ಸ್ನಾತಕೋತ್ತರ ಪದವಿಗಳು ಅಥವಾ ಡಿಪ್ಲೋಮೊಗಳನ್ನು ಪ್ರದಾನ ಮಾಡುವುದಕ್ಕೆ ಮೊದಲು ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ [2][ಕಡ್ಡಾಯ ಸೇವೆಗಾಗಿ][2] ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಪದವಿಗಳು ಅಥವಾ ಸ್ನಾತಕೋತ್ತರ ಪದವಿಗಳು ಅಥವಾ ಡಿಪ್ಲೋಮೊಗಳನ್ನು ಪ್ರದಾನ ಮಾಡುವುದಕ್ಕೆ ಮೊದಲು ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ [2][ಕಡ್ಡಾಯ ಸೇವೆಗಾಗಿ][2] ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ :–

1. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆಗೆ [1][XXX][1] ಅಧಿನಿಯಮ 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಆಕುಕ 246 ಹೆಚ್‌ಎಸ್‌ಹೆಚ್ 2015, ದಿನಾಂಕ: 24.07.2015ರಿಂದ ಜಾರಿಗೆ ಬಂದಿದೆ.
(ಅಧಿಸೂಚನೆಯನ್ನು ಅಧಿನಿಯಮದ ಕೊನೆಯ ಪುಟದಲ್ಲಿ ನೋಡಬಹುದು)

1. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಸರ್ಕಾರಿ ಆಸ್ಪತ್ರೆ" ಎಂದರೆ ಮತ್ತು ಜಿಲ್ಲಾ ಆಸ್ಪತ್ರೆ ಇದು ಇತರ ದೊಡ್ಡ ಆಸ್ಪತ್ರೆ, ನಗರ ಕುಟುಂಬ ಕಲ್ಯಾಣ ಕೇಂದ್ರ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ, ತಾಲ್ಲೂಕು ಮಟ್ಟದಲ್ಲಿಯ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಉಪ ಕೇಂದ್ರ, ಸಂಚಾರಿ ಆರೋಗ್ಯ ಘಟಕ, ಸಂಚಾರಿ ಟ್ರೈಬಲ್ ಘಟಕ, ಹೆರಿಗೆ ಕೇಂದ್ರ, ಸಂಸ್ಥೆ, ಕೇಂದ್ರ ಅಥವಾ ಸರ್ಕಾರದಿಂದ ಸ್ಥಾಪಿಸಲ್ಪಟ್ಟಿರುವ ಯಾವುದೇ ಹೆಸರಿನಿಂದ ಕರೆಯಲ್ಪಡುವ ಮತ್ತು ಯಾವುದೇ ಇತರ ಕೇಂದ್ರ ಇವುಗಳನ್ನು ಒಳಗೊಳ್ಳುತ್ತದೆ;

(ಬಿ) "ವೈದ್ಯಕೀಯ ಕೋರ್ಸುಗಳು" ಎಂದರೆ, ಎಂಬಿಬಿಎಸ್ ಪದವಿಯನ್ನು ಪ್ರದಾನ ಮಾಡುವುದಕ್ಕೆ ಸಂಬಂಧಿಸಿದ ಪದವಿ ಕೋರ್ಸುಗಳು;

(ಸಿ) "ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳು" ಎಂದರೆ, ವೈದ್ಯಕೀಯದಲ್ಲಿ ಸ್ನಾತಕೋತ್ತರ ಪದವಿಯನ್ನು ಪ್ರದಾನ ಮಾಡುವುದಕ್ಕೆ ಸಂಬಂಧಿಸಿದ ಸ್ನಾತಕೋತ್ತರ ಪದವಿ ಕೋರ್ಸುಗಳು;

(ಡಿ) "ಕೌನ್ಸಿಲಿಂಗ್ ಪ್ರಕ್ರಿಯೆ" ಎಂದರೆ, ಹಂಚಿಕೆಗಾಗಿ ಅಥವಾ ಸ್ಥಳನಿಯುಕ್ತಿಗಾಗಿ ಪರಿಗಣಿಸಿರುವ ವ್ಯಕ್ತಿಗೆ, ನಿಯಮಿಸಬಹುದಾದ ಅಂಥ ನಿಯಮಗಳಿಗನುಸಾರವಾಗಿ ಮೆರಿಟನ ಆಧಾರದ ಮೇಲೆ ಆದ್ಯತೆಯಲ್ಲಿ ಸ್ಥಳವನ್ನು ಆಯ್ಕೆ ಮಾಡಲು ಒಬ್ಬ ವ್ಯಕ್ತಿಗೆ ಅವಕಾಶವನ್ನು ನೀಡುವ ಪ್ರಕ್ರಿಯೆ;

(ಇ) "ಗ್ರಾಮೀಣ ಪ್ರದೇಶ" ಎಂದರೆ, ನಗರ ಪ್ರದೇಶ ಆಗಿರದ ಒಂದು ಪ್ರದೇಶ;

(ಎಫ್) "ಸೂಪರ್ ಸ್ಪೇಷಾಲಿಟಿ ಕೋರ್ಸುಗಳು" ಎಂದರೆ, ವೈದ್ಯಕೀಯದಲ್ಲಿ ಸೂಪರ್ ಸ್ಪೇಷಾಲಿಟಿ ಪದವಿಯನ್ನು ಪ್ರದಾನ ಮಾಡುವುದಕ್ಕೆ ಸಂಬಂಧಿಸಿದ ಕೋರ್ಸುಗಳು;

(ಜಿ) "ವಿಶ್ವವಿದ್ಯಾಲಯ" ಎಂದರೆ, ರಾಜ್ಯದಲ್ಲಿನ ಕಾನೂನಿನ ಮೂಲಕ ಸ್ಥಾಪಿತವಾದ ವಿಶ್ವವಿದ್ಯಾಲಯ ಅಥವಾ ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) ಅಡಿಯಲ್ಲಿ ಭಾವಿತ ವಿಶ್ವವಿದ್ಯಾಲಯವೆಂದು ಘೋಷಿಸಲ್ಪಟ್ಟ ಒಂದು ವಿಶ್ವವಿದ್ಯಾಲಯ;

(ಎಚ್) "ನಗರ ಪ್ರದೇಶ" ಎಂದರೆ, ನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಅಥವಾ ಕರ್ನಾಟಕ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಇತರ ಅಧಿಸೂಚಿತ ಪ್ರದೇಶಗಳ ಮಿತಿಗಳೊಳಗೆ ಇರುವ ಯಾವುದೇ ಪ್ರದೇಶ ಮತ್ತು ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸಬಹುದಾದಂತೆ ಮೇಲೆ ಅಧಿಸೂಚಿಸಿದ ಪ್ರದೇಶಗಳ ಪರಿಮಿತಿಗಳಿಂದ ಅಂಥ ದೂರದವರೆಗೆ ಇರುವ ಪ್ರದೇಶ;

**3. ವೈದ್ಯಕೀಯ ಕೋರ್ಸನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆ.–** (1) ಎಂಬಿಬಿಎಸ್ ಪದವಿ ಕೋರ್ಸನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಮತ್ತು ಒಂದು ವರ್ಷದ ಇಂಟರ್ನ್‌ಶಿಪ್ ಪೂರ್ಣಗೊಳಿಸಿದ ತರುವಾಯ ಪ್ರತಿಯೊಬ್ಬ ಅಭ್ಯರ್ಥಿಯು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಕೌನ್ಸಿಲಿಂಗ್‌ನ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಹಂಚಿಕೆಯಾದ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅಥವಾ ಸರ್ಕಾರಿ ಆಸ್ಪತ್ರೆಗಳಲ್ಲಿ [3][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ][3] ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡತಕ್ಕದ್ದು. ಅಂಥ ಸೇವಾ ಅವಧಿಯಲ್ಲಿ ಆತನನ್ನು [1][ಕಿರಿಯ ನಿವಾಸಿ (ಜೂನಿಯರ್ ರೆಸಿಡೆಂಟ್)][1] ಎಂದು ಕರೆಯತಕ್ಕದ್ದು.

[3][ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು.][3]

[5][ಮತ್ತು ಪರಂತು, ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿಸ್ಥಾನಗಳನ್ನು ಆದ್ಯತೆಯ ಮೇಲೆ ತುಂಬತಕ್ಕದ್ದು ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿ ಹುದ್ದೆಗಳಿಗಿಂತ ಹೆಚ್ಚಿನ ಅಭ್ಯರ್ಥಿಗಳ ಸಂಖ್ಯೆಯಿರುವ ಸಂದರ್ಭದಲ್ಲಿ ನಗರ ಪ್ರದೇಶಗಳಲ್ಲಿನ ಖಾಲಿಸ್ಥಾನಗಳಿಗೆ ಒಂದು ವರ್ಷದ ಕಡ್ಡಾಯ ಸೇವೆ ಸಲ್ಲಿಸಲು ಅಭ್ಯರ್ಥಿಗಳನ್ನು ಸ್ಥಳನಿಯುಕ್ತಿಗೊಳಿಸುವ ಮೂಲಕ ತುಂಬಬಹುದು.][5]

(2) [2][XXX][2]

(3) ಒಂದು ವರ್ಷದ ಕಡ್ಡಾಯ [6][XXX][6] ಸೇವೆಗೆ [2][XXX][2] ಒಳಪಟ್ಟ ಪ್ರತಿಯೊಬ್ಬ ಅಭ್ಯರ್ಥಿಗೆ [4][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ][4] ಅಂಥ ವೃತ್ತಿ ವೇತನವನ್ನು (ಸ್ಟೈಫಂಡ್) ಸಂದಾಯ ಮಾಡತಕ್ಕದ್ದು.

(4) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, (1)ನೇ ಉಪ ಪ್ರಕರಣದಲ್ಲಿ ಕಡ್ಡಾಯ [6][XXX][6] ಸೇವೆಗೆ [2][XXX][2] ಒಳಪಡದಿರುವಂಥ [3][ಅಥವಾ ಕೆಲಸ ಮಾಡಲು ನಿರಾಕರಿಸುವ ಅಥವಾ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹದಾದಂಥ ಷರತ್ತುಗಳನ್ನು ಪಾಲಿಸದಿರುವ][3] ಪ್ರತಿಯೊಬ್ಬ ಅಭ್ಯರ್ಥಿಯು, ಕರ್ನಾಟಕ ವೈದ್ಯಕೀಯ ನೋಂದಣಿ ಅಧಿನಿಯಮ, 1961ರಡಿಯಲ್ಲಿ ಅಥವಾ ಭಾರತೀಯ ವೈದ್ಯಕೀಯ ಪರಿಷತ್ತು ಅಧಿನಿಯಮ, 1956 ರಡಿಯಲ್ಲಿ ರಾಜ್ಯದಲ್ಲಿ ಶಾಶ್ವತ ನೋಂದಣಿಗೆ ಅರ್ಹರಾಗಿರತಕ್ಕದ್ದಲ್ಲ:

ಪರಂತು, ಅಂಥ ಅಭ್ಯರ್ಥಿಗಳಿಗೆ, [1][ಸೇವೆ][1]ಯ ಅವಧಿಯಲ್ಲಿ ರೋಗಿಗಳಿಗೆ ಸ್ವತಂತ್ರವಾಗಿ ಚಿಕಿತ್ಸೆ ನೀಡಲು ಮತ್ತು ಔಷಧಿಗಳನ್ನು ನಿಯಮಿಸಲು ಸದರಿ [1][ಸೇವೆ][1]ಗೆ ಒಳಪಡುವವರೆಗೆ, ತಾತ್ಕಾಲಿಕ ನೋಂದಣಿಯನ್ನು ನೀಡಬಹುದಾಗಿದೆ.

[5][ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಎಂಡಿ ಅಥವಾ ಎಂಎಸ್ ಅಥವಾ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು.][5]

1. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
3. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.
4. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
5. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.
6. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.

[1]**[3ಎ. ಆದ್ಯತೆ ಮತ್ತು ವಿನಾಯಿತಿ.-** ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, 3, 4 ಮತ್ತು 5ನೇ ಪ್ರಕರಣಗಳಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ಕಡ್ಡಾಯ ಸೇವೆಗಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಅಸ್ತಿತ್ವದಲ್ಲಿರುವ ಖಾಲಿಸ್ಥಾನಗಳನ್ನು ತುಂಬುವಾಗ, ಸರ್ಕಾರಿ ಕೋಟಾ ಸೀಟುಗಳಡಿ ವೈದ್ಯಕೀಯ ಕೋರ್ಸು ಉತ್ತೀರ್ಣರಾದ ಅಭ್ಯರ್ಥಿಗಳನ್ನು ಆದ್ಯತೆಯ ಮೇಲೆ ತುಂಬತಕ್ಕದ್ದು ಹಾಗೂ ಉಳಿದ ಖಾಲಿಸ್ಥಾನಗಳನ್ನು ಸಾಂಸ್ಥಿಕ ಸೀಟುಗಳಡಿ ವೈದ್ಯಕೀಯ ಕೋರ್ಸುಗಳನ್ನು ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಂದ ತುಂಬಬಹುದು ಮತ್ತು ಹೆಚ್ಚುವರಿ ಅಭ್ಯರ್ಥಿಗಳನ್ನು ಕಡ್ಡಾಯ ಸೇವೆಯಿಂದ ವಿನಾಯಿತಿಗೊಳಿಸಬಹುದು.

**ವಿವರಣೆ:** ಈ ಪ್ರಕರಣದ ಉದ್ದೇಶಕ್ಕಾಗಿ "ಸರ್ಕಾರಿ ಸೀಟುಗಳು" ಮತ್ತು "ಸಾಂಸ್ಥಿಕ ಸೀಟುಗಳು" ಎಂಬುದು ಕರ್ನಾಟಕ ವೃತ್ತಿಪರ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿರ್ಧರಣೆ) ಅಧಿನಿಯಮ, 2006 (2006ರ ಕರ್ನಾಟಕ ಅಧಿನಿಯಮ 8)ರಲ್ಲಿ ಪರಿಭಾಷಿಸಲಾದ ಅದೇ ಅರ್ಥವನ್ನು ಹೊಂದಿರತಕ್ಕದ್ದು.][1]

1. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**4. ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆ** [1][XXX][1].– (1) 3ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಕಡ್ಡಾಯ [5][XXX][5] ಸೇವೆಗೆ [1][XXX][1] ಒಳಪಡಿಸಿದ ಅಭ್ಯರ್ಥಿಗಳನ್ನು ಹೊರತುಪಡಿಸಿ, ಸ್ನಾತಕೋತ್ತರ ಡಿಪ್ಲೋಮೊ ಅಥವಾ ಪದವಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದಂಥ ಪ್ರತಿಯೊಬ್ಬ ಅಭ್ಯರ್ಥಿಯು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ರಾಜ್ಯದಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಮತ್ತು ಸ್ಥಳ ನಿಯುಕ್ತಿಯಾದ [5][XXX][5] ಪ್ರದೇಶದಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ [3][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ][3] ಒಂದು ವರ್ಷದ ಕಡ್ಡಾಯ ಸೇವೆಗೆ [1][XXX][1] ಒಳಪಡತಕ್ಕದ್ದು. ಅಂಥ ಸೇವಾ ಅವಧಿಯಲ್ಲಿ ಆತನನ್ನು [2][ಹಿರಿಯ ನಿವಾಸಿ (ಸೀನಿಯರ್ ರೆಸಿಡೆಂಟ್)][2] ಎಂದು ಕರೆಯತಕ್ಕದ್ದು. ಆತನು [4][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ][4] ಅಂಥ ವೃತ್ತಿ ವೇತನಕ್ಕೆ ಅರ್ಹನಾಗಿರತಕ್ಕದ್ದು.

[3][ಪರಂತು, ಸ್ನಾತಕೋತ್ತರ ಪದವಿಯ ತರುವಾಯ, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು.][3]

[2][(2) 3ನೇ ಪ್ರಕರಣದ(4)ನೇ ಉಪ-ಪ್ರಕರಣದಲ್ಲಿನ ಉಪಬಂಧಗಳು, ಈ ಪ್ರಕರಣದ ಅಡಿಯಲ್ಲಿ ಸ್ನಾತಕೋತ್ತರ ಪದವೀಧರರಿಗೆ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು:

ಪರಂತು, ರೋಗಿಗಳಿಗೆ ಸ್ವತಂತ್ರವಾಗಿ ಚಿಕಿತ್ಸೆ ನೀಡಲು ಮತ್ತು ಔಷಧವನ್ನು ಸೂಚಿಸಲು ಕಡ್ಡಾಯ ಗ್ರಾಮೀಣ ಸೇವೆಗೆ ಒಳಗಾಗುವ ಅಂಥ ಅಭ್ಯರ್ಥಿಗಳಿಗೆ, ಅಂಥ ಸೇವೆಯು ಪೂರ್ಣಗೊಳ್ಳವವರೆಗೆ ತಾತ್ಕಾಲಿಕ ನೋಂದಣಿಯನ್ನು ನೀಡಬಹುದು;][2]

[6][ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಸೂಪರ್ ಸ್ಪೆಷಾಲಿಟಿ ಅಥವಾ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು.][6]

1. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
3. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.
4. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
5. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
6. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ

**5. ಸೂಪರ್‌ಸ್ಪೆಷಾಲಿಟಿ ಪದವಿ ಕೋರ್ಸು ಪೂರ್ಣಗೊಳಿಸಿದ ಅಭ್ಯರ್ಥಿಯ ಕಡ್ಡಾಯ ಸೇವೆ** [2][XXX][2].– (1) ಸೂಪರ್ ಸ್ಪೆಷಾಲಿಟಿ ಕೋರ್ಸುಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಪ್ರತಿಯೊಬ್ಬ ಅಭ್ಯರ್ಥಿಯು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ರಾಜ್ಯದಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಮತ್ತು ಸ್ಥಳ ನಿಯುಕ್ತಿಯಾದ ಹಂಚಿಕೆಯಾದ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ [3][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ][3] ಒಂದು ವರ್ಷದ ಕಡ್ಡಾಯ ಸೇವೆಗೆ [2][XXX][2] ಒಳಪಡತಕ್ಕದ್ದು. ಆತನಿಗೆ, [4][ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ][4] ಅಂಥ ವೃತ್ತಿವೇತನವನ್ನು ಸಂದಾಯ ಮಾಡತಕ್ಕದ್ದು:

ಪರಂತು, 3ನೇ ಪ್ರಕರಣದ (1)ನೇ ಉಪಪ್ರಕರಣ ಅಥವಾ 4ನೇ ಪ್ರಕರಣದ (1)ನೇ ಉಪಪ್ರಕರಣದಡಿಯಲ್ಲಿ ಕಡ್ಡಾಯ ಸೇವೆಯನ್ನು [2][XXX][2] ಮಾಡಿದ ಅಭ್ಯರ್ಥಿಗಳನ್ನು ಈ ಪ್ರಕರಣದಡಿಯಲ್ಲಿನ ಕಡ್ಡಾಯ ಸೇವೆಯಿಂದ [2][XXX][2] ವಿನಾಯತಿಗೊಳಿಸತಕ್ಕದ್ದು.

[3][ಮತ್ತು ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು.] [3]

[1][(2) 3ನೇ ಪ್ರಕರಣದ (4)ನೇ ಉಪಪ್ರಕರಣದ ಉಪಬಂಧಗಳು ಸೂಪರ್ ಸ್ಪೆಷಾಲಿಟಿ ಕೋರ್ಸುಗಳನ್ನು ತೇರ್ಗಡೆಯಾಗುವ ಅಭ್ಯರ್ಥಿಗಳಿಗೆ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯವಾಗತಕ್ಕದ್ದು;

ಪರಂತು, ರೋಗಿಗಳಿಗೆ ಸ್ವತಂತ್ರವಾಗಿ ಚಿಕಿತ್ಸೆ ನೀಡಲು ಮತ್ತು ಔಷಧವನ್ನು ಸೂಚಿಸಲು ಕಡ್ಡಾಯ [5][XXX][5] ಸೇವೆಗೆ ಒಳಗಾಗುವ ಅಂಥ ಅಭ್ಯರ್ಥಿಗಳಿಗೆ ಅಂಥ ಸೇವೆಯು ಪೂರ್ಣಗೊಳ್ಳುವವರೆಗೆ ತಾತ್ಕಾಲಿಕ ನೋಂದಣಿಯನ್ನು ನೀಡಬಹುದು.][1]

[6][ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು

ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು.][6]

1. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2017ರ ಅಧಿನಿಯಮ ಸಂಖ್ಯೆ 35ರ ಮೂಲಕ 11.07.2017 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
3. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.
4. 2024ರ ಅಧಿನಿಯಮ ಸಂಖ್ಯೆ 03ರ ಮೂಲಕ 08.11.2023 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
5. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಬಿಟ್ಟುಬಿಡಲಾಗಿದೆ.
6. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

[1]**[5ಎ. ಅಪೀಲು.-** ಈ ಅಧಿನಿಯಮದ ಉಪಬಂಧಗಳಡಿ ಸಕ್ಷಮ ಪ್ರಾಧಿಕಾರದ ಆದೇಶಗಳ ಮೂಲಕ ಬಾಧಿತನಾದ ಯಾರೇ ವ್ಯಕ್ತಿಯು, ಸರ್ಕಾರವು ಅಧಿಸೂಚಿಸಿದಂತೆ ನಿರ್ದಿಷ್ಟಪಡಿಸಿದ ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸಬಹುದು ಮತ್ತು ನಿರ್ದಿಷ್ಟಪಡಿಸಿದ ಪ್ರಾಧಿಕಾರವು ನಿಯಮಿಸಬಹುದಾದ ರೀತಿಯಲ್ಲಿ ಅದನ್ನು ವಿಲೇವಾರಿ ಮಾಡಬಹುದು.][1]

1. 2025ರ ಅಧಿನಿಯಮ ಸಂಖ್ಯೆ 71ರ ಮೂಲಕ 27.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**6. ದಂಡ.–** ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಿದ ಯಾವುವೇ ಉಪಬಂಧಗಳನ್ನು ಯಾವೊಬ್ಬನು ಉಲ್ಲಂಘಿಸಿದಲ್ಲಿ, ಆತನು, ಹದಿನೈದು ಲಕ್ಷರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಮೂವತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ದಂಡದೊಂದಿಗೆ ದಂಡಿತನಾಗತಕ್ಕದ್ದು.

**7. ಇತರ ಕಾನೂನುಗಳನ್ನು ಅಧಿಕ್ರಮಿಸುವ ಅಧಿನಿಯಮ.–** ತತ್ಕಾಲದಲ್ಲಿ ಜಾರಿಯಲ್ಲಿರುವ ಇತರ ಯಾವುದೇ ಕಾನೂನಿನಲ್ಲಿ ಅಸಂಗತವಾದುದು ಏನೇ ಇದ್ದರೂ, ಈ ಅಧಿನಿಯಮದ ಉಪಬಂಧಗಳು ಜಾರಿಯಲ್ಲಿರತಕ್ಕದ್ದು.

**8. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ ಮತ್ತು ತೊಂದರೆಗಳನ್ನು ನಿವಾರಿಸಲು ಅವಶ್ಯವೆಂದು ಅಥವಾ ಯುಕ್ತವೆಂದು ತನಗೆ ಕಂಡುಬರುವಂತೆ ಉಪಬಂಧವನ್ನು ಕಲ್ಪಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭವಾದ ದಿನಾಂಕದಿಂದ ಮೂರು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ ಅಂಥ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

**9. ನಿಯಮಗಳ ರಚನಾಧಿಕಾರ.–** (1) ಸರ್ಕಾರವು, ಅಧಿಸೂಚನೆಯ ಮೂಲಕ ಮತ್ತು ಪೂರ್ವ ಪ್ರಕಟಣೆಯ ತರುವಾಯ, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು.

(2) ಈ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ನಂತರ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲವು ಅಧಿವೇಶನದಲ್ಲಿದ್ದರೆ ಅದರ ಪ್ರತಿಯೊಂದು ಸದನದ ಮುಂದೆ, ಮತ್ತು ಅದು ಅಧಿವೇಶನದಲ್ಲಿಲ್ಲದಿದ್ದರೆ, ನಿಕಟ ತರುವಾಯದ ಒಟ್ಟು ಮೂವತ್ತು ದಿನಗಳ ಅವಧಿಯ ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಲಾದ ಅಧಿವೇಶನವು ಅಥವಾ ಅದರ ನಿಕಟೋತ್ತರದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮುಂಚೆ, ಎರಡೂ ಸದನಗಳು ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಒಪ್ಪಿದರೆ ಅಥವಾ ಆ ನಿಯಮವನ್ನು ರದ್ದುಗೊಳಿಸಬೇಕೆಂದು ಒಪ್ಪಿದರೆ, ಆ ನಿಯಮವು, ಆ ಮಾರ್ಪಾಟನ್ನು ಅಥವಾ ರದ್ದತಿಯನ್ನು ಅಧಿಸೂಚಿಸಿದಂಥ ದಿನಾಂಕದಿಂದ ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಜಾರಿಗೊಳ್ಳತಕ್ಕದ್ದು ಅಥವಾ ರದ್ದಾಗತಕ್ಕದ್ದು;

ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಪ್ರತಿಕೂಲವಾಗಿರತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಎಸ್.ಬಿ. ಗುಂಜಿಗಾವಿ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಆಕುಕ 249 ಹೆಚ್‌ಎಸ್‌ಹೆಚ್ 2015, ಬೆಂಗಳೂರು, ದಿನಾಂಕ: 24–07–2015**

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012 (ಕರ್ನಾಟಕ ಅಧಿನಿಯಮ ಸಂಖ್ಯೆ:26)ರ ಪ್ರಕರಣ 1(3)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012 (ಕರ್ನಾಟಕ ಅಧಿನಿಯಮ ಸಂಖ್ಯೆ:26)ವು ದಿನಾಂಕ: 24.07.2015ರಿಂದ ಜಾರಿಗೆ ಬರತಕ್ಕದೆಂದು ಈ ಮೂಲಕ ಗೊತ್ತುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಬಿ.ಎಸ್.ನಾಗರಾಜ್
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಸೇವೆಗಳು)

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 35**

(2017ರ ಜುಲೈ ತಿಂಗಳ 11ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಅಧಿನಿಯಮ, 2017**

(2017ರ ಜುಲೈ ತಿಂಗಳ 06ನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ. ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012ನ್ನು (2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26) ತಿದ್ದುಪಡಿ ಮಾಡುವುದು ಯಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

ಶೀರ್ಷಿಕೆ, ದೀರ್ಘ ಶೀರ್ಷಿಕೆ ಮತ್ತು ಪ್ರಸ್ತಾವನೆಯ ತಿದ್ದುಪಡಿ ಹಾಗೂ ಪ್ರಕರಣ 3,4,5 ಮತ್ತು ಪದಾವಳಿಯನ್ನು ಬಿಟ್ಟುಬಿಡುವುದನ್ನು ಮೂಲ ಅಧಿನಿಯಮದಲ್ಲಿ ಇಂಧೀಕರಿಸಲಾಗಿದೆ.

**2024ರ ಕರ್ನಾಟಕ ಅಧಿನಿಯಮ ಸಂಖ್ಯೆ:03**

(2024ರ ಜನವರಿ ತಿಂಗಳ 30ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧಿನಿಯಮ, 2023

(2024ರ ಜನವರಿ ತಿಂಗಳ 29ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು (2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ನವಂಬರ್ 8ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 3ನೇ ಪ್ರಕರಣದಲ್ಲಿ,-

(ಎ) (1)ನೇ ಉಪಪ್ರಕರಣದಲ್ಲಿ “ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ” ಎಂಬ ಪದಗಳ ಮೊದಲು “ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ” ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) (1)ನೇ ಉಪಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

“ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು.”

(ಸಿ) (3)ನೇ ಉಪಪ್ರಕರಣದಲ್ಲಿ “ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳಲ್ಲಿ ಸಾಮಾನ್ಯ ಕರ್ತವ್ಯ ನಿರತ ವೈದ್ಯರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ” ಎಂಬ ಪದಗಳಿಗೆ ಬದಲಾಗಿ “ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ” ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಡಿ) (4)ನೇ ಉಪಪ್ರಕರಣದಲ್ಲಿ "ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡದಿರುವಂಥ" ಎಂಬ ಪದಗಳ ತರುವಾಯ "ಅಥವಾ ಕೆಲಸ ಮಾಡಲು ನಿರಾಕರಿಸುವ ಅಥವಾ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ಷರತ್ತುಗಳನ್ನು ಪಾಲಿಸದಿರುವ" ಎಂಬ ಪದಗಳನ್ನು ಸೇರಿಸತಕ್ಕದ್ದು.

**3. 4ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ,-

(ಎ) "ಒಂದು ವರ್ಷದ ಕಡ್ಡಾಯ ಸೇವೆಗೆ" ಎಂಬ ಪದಗಳಿಗೆ ಮೊದಲು "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷತಜ್ಞರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ" ಎಂಬ ಪದಗಳಿಗೆ ಬದಲಾಗಿ "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಸಿ) (1)ನೇ ಉಪಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಸ್ನಾತಕೋತ್ತರ ಪದವಿಯ ತರುವಾಯ, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು."

**4. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ,-

(ಎ) "ಒಂದು ವರ್ಷದ ಕಡ್ಡಾಯ ಸೇವೆಗೆ" ಎಂಬ ಪದಗಳಿಗೆ ಮೊದಲು "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ವಿಶೇಷತಜ್ಞರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ" ಎಂಬ ಪದಗಳಿಗೆ ಬದಲಾಗಿ "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಸಿ) ಮೊದಲನೇ ಪರಂತುಕದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು."

**5. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 05)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**2025ರ ಕರ್ನಾಟಕ ಅಧಿನಿಯಮ ಸಂಖ್ಯೆ:71**

(2025ರ ಸೆಪ್ಟೆಂಬರ್ ತಿಂಗಳ 12ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು 2025ರ ಮೇ 27ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 3ನೇ ಪ್ರಕರಣದಲ್ಲಿ,-

(i) (1)ನೇ ಉಪಪ್ರಕರಣದ ಈಗಾಗಲೇ ಇರುವ ಪರಂತುಕದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು, ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿಸ್ಥಾನಗಳನ್ನು ಆದ್ಯತೆಯ ಮೇಲೆ ತುಂಬತಕ್ಕದ್ದು ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿ ಹುದ್ದೆಗಳಿಗಿಂತ ಹೆಚ್ಚಿನ ಅಭ್ಯರ್ಥಿಗಳ ಸಂಖ್ಯೆಯಿರುವ ಸಂದರ್ಭದಲ್ಲಿ ನಗರ ಪ್ರದೇಶಗಳಲ್ಲಿನ ಖಾಲಿಸ್ಥಾನಗಳಿಗೆ ಒಂದು ವರ್ಷದ ಕಡ್ಡಾಯ ಸೇವೆ ಸಲ್ಲಿಸಲು ಅಭ್ಯರ್ಥಿಗಳನ್ನು ಸ್ಥಳನಿಯುಕ್ತಿಗೊಳಿಸುವ ಮೂಲಕ ತುಂಬಬಹುದು."

(ii) (3)ನೇ ಉಪಪ್ರಕರಣದಲ್ಲಿ "ಗ್ರಾಮೀಣ" ಎಂಬ ಪದವನ್ನು ಬಿಟ್ಟುಬಿಡತಕ್ಕದ್ದು;

(iii) (4)ನೇ ಉಪಪ್ರಕರಣದಲ್ಲಿ,-

(ಎ) "ಗ್ರಾಮೀಣ" ಎಂಬ ಪದವನ್ನು ಬಿಟ್ಟುಬಿಡತಕ್ಕದ್ದು;

(ಬಿ) ಪರಂತುಕದ ತರುವಾಯ, ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಎಂಡಿ ಅಥವಾ ಎಂಎಸ್ ಅಥವಾ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು."

**3. 3ಎ ಹೊಸ ಪ್ರಕರಣದ ಸೇರ್ಪಡೆ.-** ಮೂಲ ಅಧಿನಿಯಮದ 3ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"**3ಎ. ಆದ್ಯತೆ ಮತ್ತು ವಿನಾಯಿತಿ.-** ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, 3, 4 ಮತ್ತು 5ನೇ ಪ್ರಕರಣಗಳಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ಕಡ್ಡಾಯ ಸೇವೆಗಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಅಸ್ತಿತ್ವದಲ್ಲಿರುವ ಖಾಲಿಸ್ಥಾನಗಳನ್ನು ತುಂಬುವಾಗ, ಸರ್ಕಾರಿ ಕೋಟಾ ಸೀಟುಗಳಡಿ ವೈದ್ಯಕೀಯ ಕೋರ್ಸು ಉತ್ತೀರ್ಣರಾದ ಅಭ್ಯರ್ಥಿಗಳನ್ನು ಆದ್ಯತೆಯ ಮೇಲೆ ತುಂಬತಕ್ಕದ್ದು ಹಾಗೂ ಉಳಿದ ಖಾಲಿಸ್ಥಾನಗಳನ್ನು ಸಾಂಸ್ಥಿಕ ಸೀಟುಗಳಡಿ ವೈದ್ಯಕೀಯ ಕೋರ್ಸುಗಳನ್ನು ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಂದ ತುಂಬಬಹುದು ಮತ್ತು ಹೆಚ್ಚುವರಿ ಅಭ್ಯರ್ಥಿಗಳನ್ನು ಕಡ್ಡಾಯ ಸೇವೆಯಿಂದ ವಿನಾಯಿತಿಗೊಳಿಸಬಹುದು.

**ವಿವರಣೆ:** ಈ ಪ್ರಕರಣದ ಉದ್ದೇಶಕ್ಕಾಗಿ "ಸರ್ಕಾರಿ ಸೀಟುಗಳು" ಮತ್ತು "ಸಾಂಸ್ಥಿಕ ಸೀಟುಗಳು" ಎಂಬುದು ಕರ್ನಾಟಕ ವೃತ್ತಿಪರ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿರ್ಧರಣೆ) ಅಧಿನಿಯಮ, 2006 (2006ರ ಕರ್ನಾಟಕ ಅಧಿನಿಯಮ 8)ರಲ್ಲಿ ಪರಿಭಾಷಿಸಲಾದ ಅದೇ ಅರ್ಥವನ್ನು ಹೊಂದಿರತಕ್ಕದ್ದು."

**4. 4ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದ, (1)ನೇ ಉಪ-ಪ್ರಕರಣದಲ್ಲಿ,-

(i) "ಗ್ರಾಮೀಣ" ಎಂಬ ಪದವನ್ನು ಹಾಗೂ "ನಗರ" ಎಂಬ ಪದವನ್ನು ಬಿಟ್ಟುಬಿಡತಕ್ಕದ್ದು; ಮತ್ತು

(ii) ಈ ಮುಂದಿನ ಪರಂತುಕವನ್ನು ಕೊನೆಯಲ್ಲಿ ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು

ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಸೂಪರ್ ಸ್ಪೆಷಾಲಿಟಿ ಅಥವಾ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು."

**5. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದಲ್ಲಿನ (2)ನೇ ಉಪ-ಪ್ರಕರಣದಲ್ಲಿ,-

(ಎ) ಪರಂತುಕದಲ್ಲಿ "ಗ್ರಾಮೀಣ" ಎಂಬ ಪದವನ್ನು ಬಿಟ್ಟುಬಿಡತಕ್ಕದ್ದು.

(ಬಿ) ಪರಂತುಕದ ತರುವಾಯ, ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು ಅಭ್ಯರ್ಥಿಗಳು ಉನ್ನತ ವಾಸಂಗವನ್ನು ಪೂರ್ಣಗೊಳಿಸಿದ ನಂತರ ಒಂದು ವರ್ಷದ ಕಡ್ಡಾಯ ಸೇವೆಯ ಹೊಣೆಗಾರಿಕೆಯನ್ನು ಪೂರೈಸುವ ಅವರ ಬದ್ಧತೆಯನ್ನು ನಮೂದಿಸಿ, ತಪ್ಪಿದಲ್ಲಿ ಆತನು ದಂಡನೆಗೆ ಮತ್ತು ಅಫಿಡವಿಟ್ ಅಥವಾ ಮುಚ್ಚಳಿಕೆಯಲ್ಲಿ ನಿರ್ದಿಷ್ಟಪಡಿಸಿದ ಅಂಥ ಇತರ ತತ್ಪರಿಣಾಮಗಳಿಗೆ ಹೊಣೆಯಾಗತಕ್ಕದ್ದು ಎಂದು ಮುಚ್ಚಳಿಕೆ ಅಥವಾ ಅಫಿಡವಿಟ್ಟನ್ನು ಸಲ್ಲಿಸಿದ ಮೇಲೆ, ಅವರಿಗೆ ಕಾನೂನು ರೀತ್ಯಾ ಸ್ಥಾಪಿಸಲಾದ ವಿಶ್ವವಿದ್ಯಾನಿಲಯಗಳಲ್ಲಿ ಫೆಲೋಷಿಪ್-ನಂತಹ ಉನ್ನತ ವ್ಯಾಸಂಗಗಳನ್ನು ಪಡೆಯಲು ಷರತ್ತುಬದ್ಧ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಬಹುದು."

**6. 5ಎ ಹೊಸ ಪ್ರಕರಣದ ಸೇರ್ಪಡೆ.-** ಮೂಲ ಅಧಿನಿಯಮದ 5ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"5ಎ. ಅಪೀಲು.-** ಈ ಅಧಿನಿಯಮದ ಉಪಬಂಧಗಳಡಿ ಸಕ್ಷಮ ಪ್ರಾಧಿಕಾರದ ಆದೇಶಗಳ ಮೂಲಕ ಬಾಧಿತನಾದ ಯಾರೇ ವ್ಯಕ್ತಿಯು, ಸರ್ಕಾರವು ಅಧಿಸೂಚಿಸಿದಂತೆ ನಿರ್ದಿಷ್ಟಪಡಿಸಿದ ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸಬಹುದು ಮತ್ತು ನಿರ್ದಿಷ್ಟಪಡಿಸಿದ ಪ್ರಾಧಿಕಾರವು ನಿಯಮಿಸಬಹುದಾದ ರೀತಿಯಲ್ಲಿ ಅದನ್ನು ವಿಲೇವಾರಿ ಮಾಡಬಹುದು."

**7. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ. 06)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ತೆಗೆದುಕೊಂಡ ಯಾವುದೇ ಕ್ರಮವನ್ನು, ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಅದನ್ನು ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.